All India Radio: Bangalore
Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

20.01.2025 6.40 p.m.

***************

ಮುಖ್ಯಾಂಶಗಳು

- ತೊಗರಿಗೆ ಪ್ರತಿ ಕ್ವಿಂಟಾಲ್‌ಗೆ ೪೫೦ ರೂಪಾಯಿ ಹೆಚ್ಚುವರಿ ಬೆಂಬಲ ಬೆಲೆ ನೀಡಲು ಸರ್ಕಾರ ನಿರ್ಧಾರ
- ಬೆಳಗಾವಿಯಲ್ಲಿ ಸುವರ್ಣಸೌಧದಲ್ಲಿ ನಾಳೆ ಗಾಂಧೀಜಿ ಪ್ರತಿಮೆ ಅನಾವರಣ; ಕಾಂಗ್ರೆಸ್‌ನಿಂದ 'ಜೈ ಬಾಪು, ಜೈ ಭೀಮ್, ಜೈ ಸಂವಿಧಾನ' ಸಮಾವೇಶ
- ನಾಳೆ ಬೆಂಗಳೂರಿನಲ್ಲಿ ಬಿಜೆಪಿ ಕಾರ್ಯಕಾರಿ ಸಮಿತಿ ಸಭೆ; ರಾಜ್ಯಾಧ್ಯಕ್ಷರ ಬದಲಾವಣೆ ಕುರಿತಂತೆ ಚರ್ಚೆ
- ಮೈಸೂರಿನ ಕೇಂದ್ರ ಕಾರಾಗೃಹಕ್ಕೆ ರಾಜ್ಯ ಮಾನವ ಹಕ್ಕುಗಳ ಆಯೋಗ ಭೇಟಿ; ಖೈದಿಗಳ ಜೊತೆ ಸಂವಾದ
- ವಿಶ್ವಕಪ್ ಖೋ ಖೋ ಪಂದ್ಯಾವಳಿಯಲ್ಲಿ ಅದ್ಭುತ ಪ್ರದರ್ಶನ; ಜೀವನದಲ್ಲಿ ಮರೆಯಲಾಗದ ಕ್ಷಣ ಎಂದ ಆಟಗಾರ್ತಿ ಚೈತ್ರಾ

***************

ಬೆಂಬಲ ಬೆಲೆಯಲ್ಲಿ ತೊಗರಿ ಖರೀದಿಗೆ ರಾಜ್ಯ ಸರ್ಕಾರ ಕ್ವಿಂಟಾಲ್‌ಗೆ ಹೆಚ್ಚುವರಿ ೪೫೦ ರೂಪಾಯಿ ನೀಡಲು ನಿರ್ಧರಿಸಿದೆ. ಇದಕ್ಕಾಗಿ ೧೪೦ ಕೋಟಿ ರೂಪಾಯಿ ನೀಡಲಾಗುವುದು ಎಂದು ಕೃಷಿ ಉತ್ಪನ್ನ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಘೋಷಿಸಿದ್ದಾರೆ.

ವಿಜಯಪುರದಲ್ಲಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಮುಖಂಡರೊಂದಿಗೆ ಬೇಡಿಕೆಗಳ ಬಗ್ಗೆ ಚರ್ಚಿಸಿದ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಮಾತನಾಡಿದ ಸಚಿವರು, ಪ್ರತಿ ಕ್ವಿಂಟಾಲ್‌ಗೆ ೮ ಸಾವಿರ ರೂಪಾಯಿ ಬೆಂಬಲ ಬೆಲೆ ನೀಡಲಾಗುವುದು ಎಂದು ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ನಫೆಡ್ ಖರೀದಿ ಏಜನ್ಸಿಯಾಗಿದ್ದು, ದಾಖಲೆಗಳನ್ನು ಸಕಾಲಕ್ಕೆ ಒದಗಿಸದ ಕಾರಣ ಖರೀದಿ ಪ್ರಕ್ರಿಯೆ ವಿಳಂಬವಾಗಿದೆ. ರಾಜ್ಯಾದ್ಯಂತ ೪೦೦ಕ್ಕೂ ಅಧಿಕ ಖರೀದಿ

ಕೇಂದ್ರಗಳನ್ನು ಆರಂಭಿಸಲಾಗಿದ್ದು, ತೊಗರಿ ಬೆಳೆಗಾರರು ಆತಂಕ ಪಡುವ ಅಗತ್ಯವಿಲ್ಲ ಎಂದು ಹೇಳಿದ್ದಾರೆ.

ರೈತರ ಬೇಡಿಕೆಗೆ ರಾಜ್ಯ ಸರ್ಕಾರ ಸ್ಪಂದಿಸಿ ಕ್ವಿಂಟಾಲ್‌ಗೆ ೪೫೦ ರೂಪಾಯಿ ಹೆಚ್ಚುವರಿ ನೀಡುವ ನಿರ್ಧಾರ ಕೈಗೊಂಡಿದೆ ಎಂದು ತಿಳಿಸಿದರು.

ಇದೇ ವೇಳೆ ಆಂಧ್ರಪ್ರದೇಶದ ಹೈಬ್ರಿಡ್ ಜೋಳವನ್ನು ರಾಜ್ಯದ ಬೆಂಬಲ ಬೆಲೆ ಖರೀದಿ ಕೇಂದ್ರಗಳಲ್ಲಿ ಮಾರಾಟ ಮಾಡಿರುವುದು ಗಮನಕ್ಕೆ ಬಂದಿದ್ದು, ಇದಕ್ಕೆ ಕಡಿವಾಣ ಹಾಕಲಾಗುವುದು ಎಂದು ಹೇಳಿದ್ದಾರೆ.

ಇದೇ ವೇಳೆ ಅಗ್ನಿ ದುರಂತದಲ್ಲಿ ಸಂಭವಿಸುವ ಕಬ್ಬಿನ ಹಾನಿಗೆ ಪರಿಹಾರ ನೀಡಲು ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯಿಂದ ನಿಧಿ ಸ್ಥಾಪಿಸಲಿದ್ದು, ಈ ವರ್ಷದಿಂದಲೇ ೫೦ ಲಕ್ಷ ರೂಪಾಯಿ ತೆಗೆದಿರಿಸಲಾಗುವುದು ಎಂದು ತಿಳಿಸಿದ್ದಾರೆ.

****************

ನಾಳೆ ಬೆಳಗಾವಿಯಲ್ಲಿ ಗಾಂಧೀಜಿ ಪ್ರತಿಮೆ ಅನಾವರಣ 'ಜೈ ಬಾಪು, ಜೈ ಭೀಮ್, ಜೈ ಸಂವಿಧಾನ' ಸಮಾವೇಶ ನಡೆಯಲಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭಾ ವಿಪಕ್ಷ ನಾಯಕ ರಾಹುಲ್ ಗಾಂಧಿ ಸೇರಿದಂತೆ ಸಚಿವರು, ಸಂಸದರು, ಪಾಲ್ಗೊಳ್ಳಲಿದ್ದಾರೆ.

ಬೆಂಗಳೂರಿನಲ್ಲಿ ಈ ಕುರಿತಂತೆ ಪ್ರತಿಕ್ರಿಯಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ೧೯೨೪ ರ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಸ್ಮರಣಾರ್ಥವಾಗಿ ಗಾಂಧೀಜಿ ಪ್ರತಿಮೆ ಅನಾವರಣ ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಮಾವೇಶಕ್ಕೆ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ಎಲ್ಲರಿಗೂ ಮುಕ್ತ ಆಹ್ವಾನ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ: ಡಿ.ಕೆ.ಶಿವಕುಮಾರ್, ಉಪಮುಖ್ಯಮಂತ್ರಿ

****************

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಬದಲಾವಣೆ ಬೇಡಿಕೆಯ ನಡುವೆ ರಾಜ್ಯ ಬಿಜೆಪಿಯ ಕೋರ್ ಕಮಿಟಿ ಸಭೆ ನಾಳೆ ಬೆಂಗಳೂರಿನಲ್ಲಿ ನಡೆಯಲಿದೆ. ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರಾಧಮೋಹನ್ ದಾಸ್ ಅಗರ್ವಾಲ್, ತಮಿಳುನಾಡಿನ ಪೊನ್ ರಾಧಕೃಷ್ಣನ್ ಮತ್ತು ರಾಜ್ಯ ಸಹಪ್ರಭಾರಿ ಸುಧಾಕರ್ ರೆಡ್ಡಿ ಸೇರಿದಂತೆ ಹಿರಿಯ ನಾಯಕರು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

ಸಭೆಯಲ್ಲಿ ರಾಜ್ಯಾಧ್ಯಕ್ಷರ ಹುದ್ದೆಗೆ ಆಯ್ಕೆ ಕುರಿತಂತೆ ಚರ್ಚೆ ನಡೆಯಲಿದೆ. ಮಧ್ಯಾಹ್ನ ೩ ಗಂಟೆಗೆ ವಿಧಾನ ಪರಿಷತ್ ಸದಸ್ಯರು, ಶಾಸಕರು, ಸಂಸದರು ಮತ್ತು ಚುನಾಯಿತ ಪ್ರತಿನಿಧಿಗಳ ಸಭೆ ನಡೆಯಲಿದೆ. ಸಭೆಯಲ್ಲಿ ರಾಜ್ಯಾಧ್ಯಕ್ಷರ ಹುದ್ದೆಗೆ ಜನಪ್ರತಿನಿಧಿಗಳ ಅಭಿಪ್ರಾಯ ಸಂಗ್ರಹ ನಡೆಯಲಿದೆ. ೪ ಗಂಟೆಗೆ ಪಕ್ಷದ ಸಂಘಟನಾ ಪ್ರಕ್ರಿಯೆಗಳ ಮೇಲೆ ಚರ್ಚೆ ನಡೆಯಲಿದೆ.

****************

ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ವಿಜ್ಞಾನದ ಬಗ್ಗೆ ಆಸಕ್ತಿ ಬೆಳೆಸುವುದರ ಜೊತೆಗೆ ಸಂಶೋಧನೆಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಸರ್ಕಾರ ಅನೇಕ ಯೋಜನೆಗಳನ್ನು ಹಮ್ಮಿಕೊಂಡಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಎಸ್.ಎಸ್. ಭೋಸರಾಜು ತಿಳಿಸಿದ್ದಾರೆ.

ಬೆಳಗಾವಿಯ ಹುಕ್ಕೇರಿ ತಾಲೂಕಿನ ಹಿಡಕಲ್ ಜಲಾಶಯದ ಅವರಣದಲ್ಲಿ ಹಮ್ಮಿಕೊಂಡ ವಿಜ್ಞಾನ ಕೇಂದ್ರ ಹಾಗೂ ತಾರಾಲಯ ಕಟ್ಟಡಕ್ಕೆ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

****************

ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷ ಡಾ.ಟಿ.ಶ್ಯಾಮ್ ಭಟ್, ಇಂದು ಮೈಸೂರಿನ ಕೇಂದ್ರ ಕಾರಾಗೃಹಕ್ಕೆ ಭೇಟಿ ನೀಡಿ ಕೈದಿಗಳ ಜೊತೆ ಸಂವಾದ ನಡೆಸಿದರು.

ಮೈಸೂರಿನ ಕಾರಾಗೃಹದಲ್ಲಿ ಇತ್ತೀಚೆಗೆ ಎಸೆನ್ಸ್ ಸೇವನೆ ಮಾಡಿ ಮೂವರು ಕೈದಿಗಳು ಸಾವನ್ನಪ್ಪಿದ್ದರು. ಈ ಪ್ರಕರಣ ಸಂಬಂಧ ಇಂದು ಮೈಸೂರಿನ ಕೇಂದ್ರ ಕಾರಾಗೃಹಕ್ಕೆ ಭೇಟಿ ನೀಡಿ ಪ್ರಕರಣದ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡಿದ್ದಾರೆ.

ಬಳಿಕ ನಗರದ ಕೆ ಆರ್ ಆಸ್ಪತ್ರೆಗೂ ಭೇಟಿ ನೀಡಿ ಕೈದಿಗಳ ಸಾವಿನ ಪ್ರಕರಣ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

***************

ರೈತರ ಭೂಮಿ ಹಾಗೂ ಇನ್ನಿತರೆ ದಾಖಲೆಗಳನ್ನು ಡಿಜಿಟಲೀಕರಣಗೊಳಿಸಲು ಕಂದಾಯ ಇಲಾಖೆ 'ಭೂ ಸುರಕ್ಷಾ ಯೋಜನೆಯನ್ನು' ಜಾರಿಗೆ ತಂದಿದ್ದು, ಮಂಡ್ಯ ಜಿಲ್ಲೆಯಲ್ಲಿ ಈಗಾಗಲೇ ೩೭ ಲಕ್ಷ ದಾಖಲೆಗಳನ್ನು ಡಿಜಿಟಲೀಕರಣ ಮಾಡಲಾಗಿದೆ ಎಂದು ಕೃಷಿ ಸಚಿವ ಚೆಲುವರಾಯ ಸ್ವಾಮಿ ತಿಳಿಸಿದ್ದಾರೆ.

ಈಗಾಗಲೇ ೧೮ ಲಕ್ಷ ಆರ್.ಟಿ.ಸಿ ಗಳಿಗೆ ಆಧಾರ್ ಜೋಡಣೆ ಕೆಲಸ ಮಾಡಲಾಗಿದೆ. ದಾಖಲೆಗಳು ಸರಿ ಇದ್ದರೆ, ರೈತರು ಆತಂಕಪಡುವ ಅಗತ್ಯವಿಲ್ಲ ಎಂದು ಹೇಳಿದ್ದಾರೆ.

***************

ಆಂಗ್ಲಭಾಷೆಯ ಪ್ರಭಾವದಿಂದ ಕನ್ನಡ ಭಾಷೆ ಸಮಸ್ಯೆ ಎದುರಿಸುತ್ತಿದೆ. ಇಂತಹ ಸವಾಲುಗಳ ನಡುವೆ ಕನ್ನಡ ಭಾಷೆ ಅಭಿವೃದ್ಧಿಗೆ, ಪರಿಹಾರ ಕಂಡುಕೊಳ್ಳುವ ಅಗತ್ಯವಿದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ.

ಗದಗ ಜಿಲ್ಲೆಯ ಗಜೇಂದ್ರಗಡ ಪಟ್ಟಣದಲ್ಲಿ ನಡೆದ ೧೦ ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಉದ್ಘಾಟಿಸಿದ ಅವರು, ಕನ್ನಡಿಗರಿಗೆ ಉದ್ಯೋಗದಲ್ಲಿ ಗ್ರಾಮೀಣ ಕೃಪಾಂಕದಂತೆ, ಕನ್ನಡ ಮಾಧ್ಯಮ ಕೃಪಾಂಕ ನೀಡುವ ಕುರಿತು ಸಮ್ಮೇಳನದಲ್ಲಿ ನಿರ್ಣಯ ಕೈಗೊಂಡು ಸರ್ಕಾರಕ್ಕೆ ಕೋರಿದಲ್ಲಿ ಕ್ರಮ ಕೈಗೊಳ್ಳಬಹುದು ಎಂದು ತಿಳಿಸಿದ್ದಾರೆ.

***************

ನವದೆಹಲಿಯಲ್ಲಿ ನಡೆದ ವಿಶ್ವಕಪ್ ಖೋ ಖೋ ಪಂದ್ಯಾವಳಿಯಲ್ಲಿ ಅದ್ಭುತ ಪ್ರದರ್ಶನ ನೀಡಿದ ಮೈಸೂರಿನ ಚೈತ್ರ, ಇದು ತಮ್ಮ ಜೀವನದಲ್ಲಿ ಮರೆಯಲಾಗದ ಅನುಭವ ಎಂದು ತಿಳಿಸಿದ್ದಾರೆ. ಆಕಾಶವಾಣಿ ಜೊತೆ ಮಾತನಾಡಿ, ವಿಶ್ವಕಪ್ ಗೆಲುವಿನ ಬಳಿಕ ರಾಜ್ಯದ ಜನತೆ ನೀಡಿದ ಪ್ರೋತ್ಸಾಹ ಹಾಗೂ ಸಹಕಾರಕ್ಕೆ ಅಭಾರಿಯಾಗಿದ್ದೇನೆ ಎಂದು ತಿಳಿಸಿದ್ದಾರೆ.

ಧ್ವನಿ: ಚೈತ್ರಾ ಆಟಗಾರ್ತಿ

***************

ಇನ್ನು ಸಂಕ್ಷಿಪ್ತ ಸುದ್ದಿ...

- ಕಲಬುರಗಿ ವಿಭಾಗದ ಎಲ್ಲ ಜಿಲ್ಲೆಯ ಅರ್ಹ ಫಲಾನುಭವಿಗಳಿಗೆ ಕಾರ್ಮಿಕ ಇಲಾಖೆಯ ಸೌಲಭ್ಯಗಳನ್ನು ಒದಗಿಸಬೇಕು ಎಂದು ರಾಯಚೂರಿನಲ್ಲಿ ಕಾರ್ಮಿಕ ಇಲಾಖೆಯ ಸಚಿವ

- ಏಪ್ರಿಲ್ ತಿಂಗಳಲ್ಲಿ ಎಲ್ಲಾ ಇಲಾಖೆಗಳ ಫಲಾನುಭವಿಗಳ ಸಮಾವೇಶ ನಡೆಸಲು ಕ್ರಮವಹಿಸಬೇಕು ಎಂದು ಕೋಲಾರ ಜಿಲ್ಲಾ ಉಸ್ತುವಾರಿ ಸಚಿವ ಬೈರತಿ ಸುರೇಶ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ..

- ಕಲಬುರಗಿ ಪೊಲೀಸ್ ಭವನದಲ್ಲಿ ಕಲಬುರಗಿ ನಗರದ ಬ್ಯಾಂಕ್ ಮ್ಯಾನೇಜರ್ ಮತ್ತು ಹಣಕಾಸು ಸಂಸ್ಥೆಗಳ ಮುಖ್ಯಸ್ಥರೊಂದಿಗೆ ಸಭೆ ನಡೆಸಿದ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ ಅವರು ಬ್ಯಾಂಕ್ ಮತ್ತು ಎ.ಟಿ.ಎಂ ಗಳಿಗೆ ನುರಿತ ಭದ್ರತಾ ಸಿಬ್ಬಂದಿಯನ್ನು ನೇಮಿಸಿಕೊಳ್ಳುವಂತೆ ಸೂಚನೆ ನೀಡಿದ್ದಾರೆ.

********ಮುಕ್ತಾಯ*******